# ಕ್ಯಾಂಪಸ್ ಸಂದರ್ಶನದಲ್ಲಿ ವಿಡಿಐಟಿ ವಿದ್ಯಾರ್ಥಿಗಳು ಆಯ್ಕೆ



ನುಡಿಜೇನು ವರದಿ

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಮೆಕ್ಯಾನಿಕಲ್ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳು ದಿವಗಿ ಟಾರ್ಕ್ ಟ್ರಾನ್ಸರ್ ಸಿಸ್ಟಮ್ ಕಂಪನಿಗೆ ಕ್ಯಾಂಪಸ್ ಸಂದರ್ಶನದ ಮೂಲಕ ಆಯ್ಕೆಯಾಗಿದ್ದಾರೆ.

ಮೆಕ್ಯಾನಿಕಲ್ ವಿಭಾಗದ ಅಂತಿಮ ವರ್ಷದ 28 ವಿದ್ಯಾರ್ಥಿಗಳು ದಿವಗಿ ಟಾರ್ಕ್ ಟ್ರಾನ್ಸರ್ ಸಿಸ್ಟಮ್ ಕಂಪನಿ ನಡೆಸಿದ ಕ್ಯಾಂಪಸ್ ಸಂದರ್ಶನದಲ್ಲಿ ಉತ್ತಮ ಪ್ರದರ್ಶನ ತೋರಿ ಉದ್ಯೋಗಾವಕಾಶವನ್ನು ತಮ್ಮದಾಗಿಸಿಕೊಂಡಿದ್ದಾರೆ. ದಿವಗಿ ಸಂಸ್ಥೆಯ ಮಾನವ ಸಂಪನ್ಮೂಲ ಅಧಿಕಾರಿಯಾದ ಪ್ರೇಮಚಂದ್ರ ಯು ಇವರು ಸಂದರ್ಶಕರಾಗಿ ಆಗಮಿಸಿದ್ದರು. ಇವರಲ್ಲಿ 18 ವಿದ್ಯಾರ್ಥಿಗಳು ಶಿರಸಿಯಲ್ಲಿ ಮತ್ತು 10 ವಿದ್ಯಾರ್ಥಿಗಳು ಪುಣೆ ಘಟಕದಲ್ಲಿ ತಮ್ಮ ವೃತ್ತಿ ಜೀವನ ಆರಂಭಿಸಲಿದ್ದಾರೆ.

ಸಿವಿಲ್ ವಿಭಾಗದ ಇಬ್ಬರು ವಿದ್ಯಾರ್ಥಿಗಳು ಆರ್ ಬಿ ಸ್ಟ್ರಕ್ಚರ್ ಸಂಸ್ಥೆಯಲ್ಲಿ ಉದ್ಯೋಗ ಅವಕಾಶ ಗಳಿಸಿಕೊಂಡರೆ, ಪ್ರತಿಷ್ಠಿತ ಇನ್ಫೋಸಿಸ್ ಸಂಸ್ಥೆಯಲ್ಲಿ 13 ವಿದ್ಯಾರ್ಥಿನಿಯರು ಉದ್ಯೋಗಾವಕಾಶ ಪಡೆದು-ಕೊಂಡಿದ್ದಾರೆ. ಐಬಿಎಂ ಸಂಸ್ಥೆಯಲ್ಲಿ ಓರ್ವ ವಿದ್ಯಾರ್ಥಿ ಹಾಗೂ ಪೆಂಟಗಾನ್ ಸ್ಪೇಸ್ ಕಂಪನಿ ನಡೆಸಿರುವ ಕ್ಯಾಂಪಸ್ ಸಂದರ್ಶನದಲ್ಲಿ 15 ವಿದ್ಯಾರ್ಥಿಗಳು ಉದ್ಯೋಗಾವಕಾಶ ಪಡೆದುಕೊಂಡಿದ್ದಾರೆ.

2024–25ನೇ ಶೈಕ್ಷಣಿಕ ವರ್ಷದಲ್ಲಿ ಮಹಾವಿದ್ಯಾಲಯದ 65ಕ್ಕೂ ಅಧಿಕ ವಿದ್ಯಾರ್ಥಿಗಳು ಉದ್ಯೋಗಾವಕಾಶ ಪಡೆದುಕೊಂಡಿರುವುದಕ್ಕೆ ಆಡಳಿತ ಮಂಡಳಿಯ ಅಧ್ಯಕ್ಷ ವಿನಾಯಕ ಲೋಕುರ್ ಹಾಗೂ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಸಂತಸ ವ್ಯಕ್ತಪಡಿಸಿದ್ದಾರೆ. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಪ್ರೊ. ಎಸ್ ಡಿ ಕುಲಕರ್ಣಿ, ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಮತ್ತು ಬೋಧಕ ಬೋಧಕೇತರ ಸಿಬ್ಬಂದಿಗಳು ವಿವಿಧ ಸಂಸ್ಥೆಗಳಿಗೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಅಭಿನಂದಿಸಿ, ಶುಭ ಹಾರೈಸಿದ್ದಾರೆ.

# ಕ್ಯಾಂಪಸ್ ಸಂದರ್ಶನದಲ್ಲಿ ಆಯ್ಕೆ




**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದ ಮೆಕ್ಯಾನಿಕಲ್ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳು ದಿವಗಿ ಟಾರ್ಕ್ ಟ್ರಾನ್ಸ್ಫರ್ ಸಿಸ್ಟಮ್ ಕಂಪನಿಗೆ ಕ್ಯಾಂಪಸ್ ಸಂದರ್ಶನದ ಮೂಲಕ ಆಯ್ಕೆಯಾಗಿದ್ದಾರೆ.

ಮೆಕ್ಯಾನಿಕಲ್ ವಿಭಾಗದ ಅಂತಿಮ ವರ್ಷದ 28 ವಿದ್ಯಾರ್ಥಿಗಳು ದಿವಗಿ ಟಾರ್ಕ್ ಟ್ರಾನ್ಸ್ಫರ್ ಸಿಸ್ಟಮ್ ಕಂಪನಿ ನಡೆಸಿದ ಕ್ಯಾಂಪಸ್ ಸಂದರ್ಶನದಲ್ಲಿ ಉತ್ತಮ ಪ್ರದರ್ಶನ ತೋರಿ ಉದ್ಯೋಗಾವಕಾಶವನ್ನು ತಮ್ಮದಾಗಿಸಿಕೊಂಡಿದ್ದಾರೆ.

ದಿವಗಿ ಸಂಸ್ಥೆಯ ಮಾನವ ಸಂಪನ್ಮೂಲ ಅಧಿಕಾರಿಯಾದ ಪ್ರೇಮಚಂದ್ರ ಯು ಇವರು ಸಂದರ್ಶಕರಾಗಿ ಆಗಮಿಸಿದ್ದರು. ಇವರಲ್ಲಿ 18 ವಿದ್ಯಾರ್ಥಿಗಳು ಶಿರಸಿಯಲ್ಲಿ ಮತ್ತು 10 ವಿದ್ಯಾರ್ಥಿಗಳು ಪುಣೆ ಘಟಕದಲ್ಲಿ ತಮ್ಮ ವೃತ್ತಿ ಜೀವನ ಆರಂಭಿಸಲಿದ್ದಾರೆ. ಸಿವಿಲ್ ವಿಭಾಗದ ಇಬ್ಬರು ವಿದ್ಯಾರ್ಥಿಗಳು ಆರ್ ಬಿ ಸ್ಟ್ರಕ್ಚರ್ ಸಂಸ್ಥೆಯಲ್ಲಿ ಉದ್ಯೋಗ ಅವಕಾಶ ಗಳಿಸಿಕೊಂಡರೆ, ಪ್ರತಿಷ್ಠಿತ ಇನ್ಫೋಸಿಸ್ ಸಂಸ್ಥೆಯಲ್ಲಿ 13 ವಿದ್ಯಾರ್ಥಿನಿಯರು ಉದ್ಯೋಗಾವಕಾಶ ಪಡೆದುಕೊಂಡಿದ್ದಾರೆ. ಐಬಿಎಂ ಸಂಸ್ಥೆಯಲ್ಲಿ ಒಬ್ಬ ವಿದ್ಯಾರ್ಥಿ ಹಾಗೂ ಪೆಂಟಗಾನ್ ಸ್ಪೇಸ್ ಕಂಪನಿ ನಡೆಸಿರುವ ಕ್ಯಾಂಪಸ್ ಸಂದರ್ಶನದಲ್ಲಿ 15 ವಿದ್ಯಾರ್ಥಿಗಳು ಉದ್ಯೋಗಾವಕಾಶ ಪಡೆದುಕೊಂಡಿದ್ದಾರೆ.

2024 – 25ನೇ ಶೈಕ್ಷಣಿಕ ವರ್ಷದಲ್ಲಿ ಮಹಾವಿದ್ಯಾಲಯದ 65ಕ್ಕೂ ಅಧಿಕ ವಿದ್ಯಾರ್ಥಿಗಳು ಉದ್ಯೋಗಾವಕಾಶ ಪಡೆದುಕೊಂಡಿರುವುದಕ್ಕೆ ಆಡಳಿತ ಮಂಡಳಿಯ ಅಧ್ಯಕ್ಷ ವಿನಾಯಕ ಲೋಕುರ್ ಹಾಗೂ ಪ್ರಾಚಾರ್ಯ ಡಾ. ವಿ.ಎ ಕುಲಕರ್ಣಿ ಸಂತಸ ವ್ಯಕ್ತಪಡಿಸಿದ್ದಾರೆ. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ವಿಭಾಗದ ಪ್ರೊ. ಎಸ್.ಡಿ ಕುಲಕರ್ಣಿ, ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಮತ್ತು ಬೋಧಕ ಬೋಧಕೇತರ ಸಿಬ್ಬಂದಿ ವಿವಿಧ ಸಂಸ್ಥೆಗಳಿಗೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಅಭಿನಂದಿಸಿ, ಶುಭ ಹಾರೈಸಿದ್ದಾರೆ.